ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ
ದಿನಾಂಕ : DATE : 29/12/20

# ಎಪಿಎಂಸಿ ಸೆಸ್ ಪ್ರಮಾಣ ಶೇ.0.6ಕ್ಕೆ ಇಳಿಕೆ

## ಸಿಎಂ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಮಹತ್ವದ ತೀರ್ಮಾನ । ಇನ್ನು ಮುಂದೆ ಶೇ.1.4 ವರ್ತಕರಿಗೆ, ಶೇ.0.6 ಎಪಿಎಂಸಿಗೆ

## ಎಟಿಎಂಗಳಿಗೆ ಹಣ ತುಂಬುವ ವಾಹನಗಳ ಭದ್ರತೆಗೆ ಸಂಬಂಧಿಸಿ ಕೇಂದ್ರದ ಮಾರ್ಗಸೂಚಿ ಅನ್ವಯ । ನಿಯಮ ತಿದ್ದುಪಡಿಗೆ ರಾಜ್ಯ ಒಪ್ಪಿಗೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 29/12/20

ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಿಗೆ (ಎಪಿಎಂಸಿ) ನೀಡುತ್ತಿದ್ದ ಸೆಸ್ ಪ್ರಮಾಣ ಶೇ.1ರಿಂದ ಶೇ.0.60ಕ್ಕೆ ಇಳಿಸಿ ಸಚಿವ ಸಂಪುಟ ಸಭೆ ಮಹತ್ವದ ನಿರ್ಧಾರ ಕೈಗೊಂಡಿದೆ. ಮುಖ್ಯಮಂತ್ರಿ ಯಡಿಯೂರಪ್ಪ ಅಧ್ಯಕ್ಷತೆಯಲ್ಲಿ ಸೋಮವಾರ ವಿಧಾನಸೌಧದಲ್ಲಿ ನಡೆದ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ.



ಸಭೆಯ ನಂತರ ಸುದ್ದಿಗಾರರಿಗೆ ವಿವರಣೆ ನೀಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ.ಮಾಧುಸ್ವಾಮಿ, ವರ್ತಕರಿಗೆ ನೀಡುವ ಶೇ.2ರಷ್ಟು ಲಾಭಾಂಶದಲ್ಲಿ ಶೇ.1.5ರಷ್ಟು ಇದ್ದ ಸೆಸ್ ಅನ್ನು ಶೇ.0.35ರಷ್ಟು ಇಳಿಕೆ ಮಾಡಿ ಈ ಹಿಂದೆ ಆದೇಶಿಸಲಾಗಿತ್ತು. ನಂತರ ಎಪಿಎಂಸಿಗಳಿಗೆ ನಷ್ಟವಾಗಲಿದೆ ಎಂದು ಶೇ.1ರಷ್ಟಕ್ಕೆ ಹೆಚ್ಚಳ ಮಾಡಲಾಯಿತು. ವರ್ತಕರು ಇದಕ್ಕೆ ವಿರೋಧ ವ್ಯಕ್ತಪಡಿಸಿದ್ದರು. ಈ ಹಿನ್ನೆಲೆಯಲ್ಲಿ ಶೇ.1ರಿಂದಶೇ.0.60ಕ್ಕೆ ಇಳಿಕೆ ಮಾಡಿ ನಿರ್ಧಾರ ಕೈಗೊಳ್ಳಲಾಗಿದೆ. ಇದೀಗ ವರ್ತಕರಿಗೆ ಶೇ.1.40ರಷ್ಟು ಲಭಿಸಿದರೆ, ಎಪಿಎಂಸಿಗಳಿಗೆ ನೀಡುವ ಸೆಸ್ ಶೇ.0.60ರಷ್ಟಾಗಿದೆ ಎಂದರು.

ಎಪಿಎಂಸಿಯಲ್ಲಿ ವಹಿವಾಗೆ 60 ಪೈಸೆ ಮಾರುಕಟ್ಟೆ ಶುಲ್ಕ ಸಿಗಲಿದೆ. ಎಪಿಎಂಸಿ ಆವರಣದ ಹೊರಗಡೆ ತೆರಿಗೆ ಕಡಿತಗೊಳಿಸುವ ಬಗ್ಗೆ ಕೇಂದ್ರದಿಂದ ಶೀಘ್ರ ಮಾರ್ಗಸೂಚಿ ಬರುವ ಸಾಧ್ಯತೆ ಇದ್ದು, ನಂತರ ರಾಜ್ಯ ಸರ್ಕಾರ ಕ್ರಮ ಜರುಗಿಸಲಿದೆ ಎಂದರು.

ಎಟಿಎಂಗಳಿಗೆ ಹಣ ತುಂಬುವ ವಾಹನಗಳ ಭದ್ರತೆಗೆ ಸಂಬಂಧಿಸಿದಂತೆ ಕೇಂದ್ರದ ಮಾರ್ಗಸೂಚಿ ಅನ್ವಯ ನಿಯಮಗಳ ತಿದ್ದುಪಡಿಗೆ ಸಚಿವ ಸಂಪುಟ ಒಪ್ಪಿಗೆ ನೀಡಿದೆ. ಇದಕ್ಕಾಗಿ ಕರ್ನಾಟಕ ಖಾಸಗಿ ಭದ್ರತಾ ಏಜೆನ್ಸಿ (ಖಾಸಗಿ ಏಜೆನ್ಸಿ ಹಣ ಸಾಗಾಣಿಕೆ) ನಿಯಮ 2020ಗೆ ಅನುಮೋದನೆ ನೀಡಲಾಗಿದೆ. ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿ ಎಟಿಎಂಗಳಿಗೆ ಹಣ ಪೂರೈಕೆ ಮಾಡುವ ಸಂಬಂಧ ಮಾರ್ಗಸೂಚಿ ಅನ್ವಯ ನಿಯಮ ರೂಪಿಸಲಿದೆ ಎಂದರು.

## ಸಹಾಯವಾಣಿ ಬಲಪಡಿಸಲು 35 ಕೋಟಿ ರು.

**ಬೆಂಗಳೂರು:** ತುರ್ತು ಸಂದರ್ಭದಲ್ಲಿ ಪೊಲೀಸ್ ಇಲಾಖೆಗೆ ಕರೆ ಮಾಡುವ 100ರ ಬದಲಿಗೆ 112 ಸಂಖ್ಯೆಗೆ ಕರೆ ಮಾಡುವ ಸಹಾಯವಾಣಿ ವ್ಯವಸ್ಥೆ ಬಲಪಡಿಸಲು 35.47 ಕೋಟಿ ರು. ಅನುದಾನ ನೀಡಲಾಗಿದೆ ಎಂದು ಇದೇ ವೇಳೆ ಸಚಿವ ಮಾಧುಸ್ವಾಮಿ ತಿಳಿಸಿದರು. ಜಪಾನ್‌ನ ಅಡ್ವಾನ್ಸ್ ಟ್ರಾಫಿಕ್ ಇನ್ಫರ್ಮೇಷನ್ ವ್ಯವಸ್ಥೆ ಮೂಲಕ ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು. ಅಲ್ಲದೆ, ಶಿವಮೊಗ್ಗದಲ್ಲಿ ಕ್ಷಿಪ್ರಕಾರ್ಯಪಡೆ ಬೆಟಾಲಿಯನ್‌ಗೆ 50 ಎಕರೆ ಜಮೀನು ಮಂಜೂರು ಮಾಡಲು ಒಪ್ಪಿಗೆ ನೀಡಲಾಗಿದೆ ಎಂದು ಮಾಹಿತಿ ನೀಡಿದರು.

## ಕಾಯ್ದೆ ಜಾಗೃತಿಗೆ ಕಿರುಚಿತ್ರ

ಎಪಿಎಂಸಿ ಕಾಯ್ದೆ ತಿದ್ದುಪಡಿಯಿಂದಾಗುವ ಅನುಕೂಲಗಳ ಬಗ್ಗೆ ರೈತರಿಗೆ ಅರಿವು ಮೂಡಿಸುವ ಮತ್ತು ರಾಜ್ಯದಲ್ಲಿನ ಎಪಿಎಂಸಿಗಳ ಮಹತ್ವ ಬಿಂಬಿಸುವ ಕಿರುಚಿತ್ರ ನಿರ್ಮಿಸಲಾಗುವುದು ಎಂದು ಸಹಕಾರ ಸಚಿವ ಎಸ್.ಟಿ.ಸೋಮಶೇಖರ್ ಹೇಳಿದರು. ಎಪಿಎಂಸಿ ಪ್ರಧಾನ ಕಚೇರಿಯಲ್ಲಿ ಸೋಮವಾರ ನಡೆದ ಕೃಷಿ ಮಾರಾಟ ಮಂಡಳಿ ಸಭೆಯಲ್ಲಿ ಮಾತನಾಡಿದ ಅವರು, ಎಪಿಎಂಸಿ ಕಾಯಿದೆ ತಿದ್ದುಪಡಿಗೆ ಸಂಬಂಧಿಸಿ ಈಗಾಗಲೇ ಮಾಧ್ಯಮಗಳ ಮೂಲಕ ಜಾಹೀರಾತು ನೀಡಲಾಗಿದೆ. ಇನ್ನು ಮುಂದೆ ಎಲ್ಲ ಜಿಲ್ಲೆಗಳಿಗೂ ಭೇಟಿ ನೀಡಿ ರೈತರಿಗೆ ಅರಿವು ಮೂಡಿಸಲಾಗುವುದು ಎಂದರು.